
# ಬಜೆಟ್ ಸೆಷನ್ ಇಂದು ಆರಂಭ

ಉ.ವಾ. 2/3/2020

## ಸಿಎಎ ಪರ ನಿರ್ಣಯ ಸಾಧ್ಯತೆ



**ಬೆಂಗಳೂರು:** ರಾಜ್ಯ ವಿಧಾನಮಂಡಲದ ಬಜೆಟ್ ಅಧಿವೇಶನ ಸೋಮವಾರದಿಂದ ಆರಂಭವಾಗಲಿದೆ. ಮಾ.5 ರಂದು 2020-21 ನೇ ಸಾಲಿನ ಬಜೆಟ್ ಮಂಡನೆಯಾಗಲಿದೆ. ಮೊದಲ ದಿನ ಜಂಟಿ ಅಧಿವೇಶನ ಉದ್ದೇಶಿಸಿ ರಾಜ್ಯಪಾಲರು ಮಾಡಿದ್ದ ಭಾಷಣಕ್ಕೆ ವಂದನೆ ಸಲ್ಲಿಸುವ ನಿರ್ಣಯದ ಮೇಲೆ ನಡೆವ ಚರ್ಚೆಗೆ ಸರ್ಕಾರದ ಪರವಾಗಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಉತ್ತರ ನೀಡಲಿದ್ದು, ವಿಧೇಯಕಗಳ ಮಂಡನೆ ಹಾಗೂ ಸಾರ್ವಜನಿಕ ಜರೂರು ವಿಷಯಗಳ ಬಗ್ಗೆ ಚರ್ಚೆ ನಡೆಯಲಿದೆ.

ಮಂಗಳವಾರ ಹಾಗೂ ಬುಧವಾರ ಉಭಯ ಸದನಗಳಲ್ಲಿ ಸಂವಿಧಾನ ಕುರಿತು ಚರ್ಚೆ ನಡೆಯಲಿದ್ದು, ಇದೇ ಸಂದರ್ಭದಲ್ಲಿ ಸಿಎಎ ಬೆಂಬಲಿಸಿ ರಾಜ್ಯ ಸರ್ಕಾರ ನಿರ್ಣಯ ಕೈಗೊಳ್ಳುವ ಸಾಧ್ಯತೆಯೂ ಇದೆ.

ಮಾ. 5 ರಂದು ಹಣಕಾಸು ಸಚಿವರೂ ಆಗಿರುವ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಬಜೆಟ್ ಮಂಡಿಸಲಿದ್ದು, ನಂತರ ಬಜೆಟ್ ಮೇಲಿನ ಚರ್ಚೆ, ಪ್ರಶ್ನೋತ್ತರ ಕಲಾಪ ನಡೆಯಲಿದೆ. ಮಾ.31 ರವರೆಗೂ ಅಧಿವೇಶನ ನಡೆಯಲಿದೆ.

ಈ ಮಧ್ಯೆ, ಸ್ವಾತಂತ್ರ್ಯ ಹೋರಾಟಗಾರ ಎಚ್.ಎಸ್.ದೊರೆಸ್ವಾಮಿ ಕುರಿತು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವಹೇಳನಕಾರಿಯಾಗಿ ಮಾತನಾಡಿದ್ದಾರೆ. ಹೀಗಾಗಿ, ಅವರ ವಿಧಾನಸಭಾ ಸದಸ್ಯತ್ವ ರದ್ದು ಮಾಡಬೇಕು ಎಂದು ಒತ್ತಾಯಿಸಿ ಸದನದಲ್ಲಿ ಹೋರಾಟ ನಡೆಸಲು ಕಾಂಗ್ರೆಸ್ ನಿರ್ಧರಿಸಿದೆ. ಇದಕ್ಕೆ ತಿರುಗೇಟು ನೀಡಲು ಆಡಳಿತಾರೂಢ ಬಿಜೆಪಿ ಸಹ ಸಜ್ಜಾಗಿದೆ.

ಉಳಿದಂತೆ ಬಜೆಟ್ ಅಧಿವೇಶನ ಸಂದರ್ಭದಲ್ಲಿ ರಾಜ್ಯ ಸರ್ಕಾರದ ವೈಫಲ್ಯಗಳನ್ನು ಮುಂದಿಟ್ಟು ಹೋರಾಟಕ್ಕೆ ಕಾಂಗ್ರೆಸ್-ಜೆಡಿಎಸ್ ಕಾರ್ಯತಂತ್ರ ರೂಪಿಸಿದೆ. ಬಿಜೆಪಿ ಸಹ ಪ್ರವಾಹ ನಿರ್ವಹಣೆ, ರೈತರ ಸಾಲ ಮನ್ನಾಗೆ ಹಣ ಹೊಂದಿಸಿರುವುದು ಸೇರಿದಂತೆ ಅಂಕಿ ಅಂಶಗಳ ಸಹಿತ ಸದನದ ಮುಂದಿಟ್ಟು ಸಮರ್ಥನೆಗೆ ಸಿದ್ಧತೆ ನಡೆಸಿದೆ.

ಬಜೆಟ್ ಅಧಿವೇಶನ ಹಿನ್ನೆಲೆಯಲ್ಲಿ ಕಾಂಗ್ರೆಸ್ ಹಾಗೂ ಜೆಡಿಎಸ್ ಶಾಸಕಾಂಗ ಪಕ್ಷದ ಸಭೆ ಸೋಮವಾರ ಬೆಳಗ್ಗೆ ನಿಗದಿಯಾಗಿದೆ. ಬಿಜೆಪಿ ಮಾ.2 ಅಥವಾ 3 ರಂದು ಶಾಸಕಾಂಗ ಪಕ್ಷ ಸಭೆ ನಡೆಸುವ ಸಾಧ್ಯತೆಯಿದೆ

### ಯಾವ ವಿಧೇಯಕ?

- ಕರ್ನಾಟಕ ಪಟ್ಟಣ, ಗ್ರಾಮಾಂತರ ಯೋಜನೆ(ತಿದ್ದುಪಡಿ) ವಿಧೇಯಕ
- ಪುರಸಭೆಗಳು, ಇತರೆ ಕಾನೂನು (ತಿದ್ದುಪಡಿ) ವಿಧೇಯಕ
- ಕರ್ನಾಟಕ ಬಹಿರಂಗ ಸ್ಥಳಗಳ (ವಿರೂಪ ಪ್ರತಿಬಂಧಿಸುವ) ತಿದ್ದುಪಡಿ ವಿಧೇಯಕ
- ರೇಸ್ ಕೋರ್ಸ್‌ಗಳಿಗೆ ಪರವಾನಗಿ (ತಿದ್ದುಪಡಿ) ವಿಧೇಯಕ
- ವಿವಿ (ತಿದ್ದುಪಡಿ) ವಿಧೇಯಕ
- ಕರ್ನಾಟಕ ಉನ್ನತ ಶೈಕ್ಷಣಿಕ ಸಂಸ್ಥೆಗಳಲ್ಲಿ ಶಿಕ್ಷಕರ ವೇತನ, ನಿವೃತ್ತಿ ವೇತನದ ನಿಯಂತ್ರಣ ವಿಧೇಯಕ
- ಕರ್ನಾಟಕ ಭೂ ಸುಧಾರಣೆಗಳ (ತಿದ್ದುಪಡಿ) ವಿಧೇಯಕ
- ಸರ್ವಜ್ಞ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರಿ ವಿಧೇಯಕ

ಸಂವಿಧಾನದ ಪರಿಪಾಲನೆಯಲ್ಲಿ ನಮ್ಮ ಜವಾಬ್ದಾರಿಗಳ ಬಗ್ಗೆ ಅರಿಯಬೇಕು, ರಾಜಕೀಯ ಚರ್ಚೆಗಿಂತ ಮೇಲ್ಪಟ್ಟಿರಬೇಕು ಎಂಬುದಕ್ಕಾಗಿ 2 ದಿನ ಸಂವಿಧಾನದ ಬಗ್ಗೆ ಚರ್ಚೆಗೆ ನಿರ್ಧರಿಸಲಾಗಿದೆ.
• ವಿಶ್ವೇಶ್ವರ ಹೆಗಡೆ ಕಾಗೇರಿ, ಸ್ಪೀಕರ್

9